CW-02
PW-03

**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರು.**

ಸ್ಪೇಷಲ್ .ಕೇಸ್(ಎಸ್.ಸಿ./ಎಸ್.ಟಿ.) ಸಂಖ್ಯೆ 488/2024

ದಿ. 08-07-2026

(ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು )

ಚಾಸಾ-02
ಪ್ರಾಸಾ-03

**ಪಾಟೀ ಸವಾಲು ಶ್ರೀ ಎಸ್.ಜಿ.ಕೆ. ವಕೀಲರಿಂದ ಆರೋಪಿತರ ಪರಃ**

19. ಹೀರೆಬೂದುರು ಗ್ರಾಮಸ್ಥರು ನೀವು ಸರಿಯಾಗಿ ಪಡಿತರ ಸಾಮ್ಯಾಗ್ರಿಗಳನ್ನು ವಿತರಣೆ ಮಾಡುತ್ತಿಲ್ಲ ಎಂದು ನಿಮ್ಮ ವಿರುದ್ಧ ದೂರು ನೀಡಿದ್ದಾರೆಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ. ಆ ರೀತಿ ದೂರು ನೀಡಲು ಆರೋಪಿಗಳೇ ಮುಂದಾಳತ್ವ ವಹಿಸಿದ್ದರು ಎಂದರೆ ಸರಿಯಲ್ಲ. ಪ್ರಸ್ತುತ ಹೀರೆಬೂದುರಿಗೆ ನ್ಯಾಯ ಬೆಲೆ ಅಂಗಡಿ ನಡೆಸಲು ಪರವಾನಗಿ ನೀಡಿಲ್ಲ ಎಂದರೆ ಸಾಕ್ಷಿ ಹೌದು ಎನ್ನುತ್ತಾರೆ. ದಿಃ 25-07-2024 ರಂದು, ಹೀರೆಬೂದುರು ಗ್ರಾಮದಲ್ಲಿ ಪಡಿತರ ಸಾಮ್ಯಾಗ್ರಿಗಳನ್ನು ವಿತರಣೆ ಮಾಡಿದ್ದೀರಾ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ. ನ್ಯಾಯ ಬೆಲೆ ಅಂಗಡಿಯಲ್ಲಿ ಎಷ್ಟು ಸಾಮಗ್ರಿಗಳು ಮಾರಾಟವಾಗಿವೆ, ಎಷ್ಟು ಸರಕು ಸಂಗ್ರಹಣೆಯಾಗಿದೆ ಮತ್ತು ಎಷ್ಟು ಜನ ಕೆಲಸಗಾರರು ಇದ್ದಾರೆ ಎಂಬ ಬಗ್ಗೆ ದಾಖಲೆಗಳು ಇರುತ್ತವೆ ಎಂಬುದು ಸರಿ. ಈ ಸಂಬಂಧ ಪೊಲೀಸಿನವರಿಗೆ ದಾಖಲೆಗಳನ್ನು ನೀಡಿರುತ್ತೇವೆ. ಈ ಪ್ರಕರಣದಲ್ಲಿ ನನ್ನ ಮಗ ಸಾಕ್ಷಿ ನುಡಿದಿದ್ದಾನೆ ಎನ್ನುವುದು ಸರಿ. ಆತ ನ್ಯಾಯಾಲಯದಲ್ಲಿ ಏನು ಸಾಕ್ಷ್ಯ ನುಡಿದಿದ್ದಾನೆ ಎಂಬ ಬಗ್ಗೆ

CW-02
PW-03

ನನ್ನೊಂದಿಗೆ ಮಾತನಾಡಿದ್ದಾನೆ ಎನ್ನುವುದು ಸರಿ. ನೀವು ಹೀರೆಬೂದುರು ಗ್ರಾಮದಲ್ಲಿ ಪಡಿತರ ಸಾಮಗ್ರಿಗಳನ್ನು ಸರಿಯಾಗಿ ವಿತರಣೆ ಮಾಡುತ್ತಿಲ್ಲ ಎಂಬ ಕಾರಣಕ್ಕಾಗಿ ನಿಮ್ಮ ಪರವಾನಿಗೆಯನ್ನು ರದ್ದು ಮಾಡಲಾಗಿದ್ದರಿಂದ ಈ ಸುಳ್ಳು ಪ್ರಕರಣವನ್ನು ಆರೋಪಿಗಳ ವಿರುದ್ಧ ದಾಖಲು ಮಾಡಿಸಿದ್ದೀರಿ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ. ದಿಃ 25-07-2024 ರಂದು ಬೆಳಿಗ್ಗೆ 10 ಗಂಟೆ ಸಮಯದಲ್ಲಿ 1 ನೇ ಆರೋಪಿಯು ನಮ್ಮ ಕಟ್ಟೆಯ ಮೇಲೆ ಕುಳಿತುಕೊಂಡಿದ್ದು, ಮತ್ತು ನಾವು ಕೆಳಗೆ ನಿಂತುಕೊಂಡಿದ್ದು, ಬೆರಳು ಮುದ್ರೆ ಪಡೆಯಲು ಎಷ್ಟು ಹೊತ್ತು ತೆಗೆದುಕೊಳ್ಳುತ್ತಿ ಎಂದು ನನಗೆ ಅವಾಚ್ಯ ಶಬ್ದಗಳಿಂದ ಬೇಡರ ಸೂಳೆಮಕ್ಕಳೆಂದು ಬೈದಿರುತ್ತಾರೆಂದು ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ನಂತರ ನಿಮ್ಮ ಮಗ ಚಾಸಾ-1 ರವರು ಮಧ್ಯ ಪ್ರವೇಶಿಸಿದಾಗ ಆತನಿಗೆ 1 ನೇ ಆರೋಪಿಯು ಚಪ್ಪಲಿಯಿಂದ ಹೊಡೆದು ಅವಮಾನ ಮಾಡಿದ್ದಾನೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ಅದೇ ರೀತಿ ನಿಮ್ಮ ಅಂಗಡಿಯನ್ನು ಮುಚ್ಚಿಕೊಂಡು ಹೋದರೆ ನಿಮ್ಮ ಜೀವ ಸಹಿತ ಬಿಡುವುದಿಲ್ಲ ಎಂದು ಆರೋಪಿಗಳು ಪ್ರಾಣದ ಬೆದರಿಕೆ ಹಾಕಿದ್ದಾರೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ಆ ಸಮಯದಲ್ಲಿ ನಾನು ಜಗಳ ಬಿಡಿಸಲು ಬಂದಾಗ ನನಗೂ ಸಹ ಆರೋಪಿತರು ಕೊರಳು ಪಟ್ಟಿಯನ್ನು ಹಿಡಿದು ಎಳೆದಾಡಿ ಹೊಡೆದಿದ್ದಾರೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ಸದರಿ ಜಗಳವನ್ನು ಚಾಸಾ-3, 4 ಮತ್ತು 6 ರವರು ಬಿಡಿಸಿರುತ್ತಾರೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು

CW-02
PW-03

ಸರಿಯಲ್ಲ. ತದನಂತರ ಪಡಿತರ ಅಂಗಡಿಯನ್ನು ಮುಚ್ಚಿ ನೇರವಾಗಿ ಪೊಲೀಸ್ ಠಾಣೆಗೆ ಹೋಗಿದ್ದೇವೆಂದರೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವಂತಹ ಯಾವುದೇ ಘಟನೆ ನಡೆದಿಲ್ಲ ಎನ್ನುವುದು ಸರಿಯಲ್ಲ. ಆರೋಪಿಗಳು ನನ್ನ ವಿರುದ್ಧ ಸುಳ್ಳು ದೂರು ನೀಡಿದ್ದರಿಂದ ನಾನು ಆರೋಪಿಗಳ ವಿರುದ್ಧ ಸುಳ್ಳು ಪ್ರಕರಣದ ದಾಖಲಿಸಿ ಈ ದಿನ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.

(ಮಾಲ ಎನ್.ಡಿ.)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಯಚೂರು.